ಇ

# OCTOBER 05, 2026
# AKASHAVANI - DHARWAD
# PRADESH SAAMACHARA (KANNADA) 12 PM

<><><>

**ಔಷಧ ನಿಯಂತ್ರಣ ಕಾಯ್ದೆಯಡಿ,** ಪಟ್ಟಿಯಲ್ಲಿ ಬರದ ಕ್ಯಾನ್ಸರ್‌ನಂತಹ ಕಾಯಿಲೆಯ ಔಷಧಗಳು ಮತ್ತು ವೈದ್ಯಕೀಯ ಸಾಮಗ್ರಿಗಳ ಮಾರಾಟಕ್ಕೆ ಲಾಭಾಂಶದ ಯಾವುದೇ ಮಿತಿಯೇ ಇಲ್ಲದ ಹಿನ್ನೆಲೆ, ಕೇಂದ್ರ ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಿ ಜೀವ ರಕ್ಷಕ ಔಷಧಗಳನ್ನು ತಕ್ಷಣ ಬೆಲೆ ನಿಯಂತ್ರಣ ವ್ಯಾಪ್ತಿಗೆ ತರಬೇಕು ಎಂದು ಕೇಂದ್ರ ಆರೋಗ್ಯ ಸಚಿವರಿಗೆ ಪತ್ರ ಬರೆದು ಆಗ್ರಹಿಸಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ಯು.ಟಿ.ಖಾದರ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ತಾಣದ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಈ ವ್ಯವಸ್ಥೆಯ ವಿರುದ್ಧ ಗಂಭೀರ ಕ್ರಮ ಆಗುವ ತನಕ ತಾವು ಬಿಡುವುದಿಲ್ಲ ಎಂದಿದ್ದಾರೆ.

<><><>

**‘ಜನ ಸೇವೆಯಿಂದ, ದೇಶ ಸೇವೆ’** ಎಂಬ ಧ್ಯೇಯದೊಂದಿಗೆ, ಮಾಸಿಕ ಜನ ಜಾಗೃತಿ ಅಭಿಯಾನದ ಹಿನ್ನೆಲೆ, ಕೇಂದ್ರ ಸರ್ಕಾರ ಕೈಗೊಂಡ, ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು, ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ, ಭಾರತದ ಈಶಾನ್ಯ ರಾಜ್ಯಗಳಿಗೆ ತಲುಪಿದ, ಅಭಿವೃದ್ಧಿಯ ಹಾದಿಯ ಕುರಿತಾಗಿದೆ. 2025ರ ಸೆಪ್ಟೆಂಬರ್‌ನಲ್ಲಿ, ಬೈರಾಬಿ–ಸೈರಾಂಗ್ ರೈಲು ಮಾರ್ಗ ಕಾರ್ಯಾರಂಭಗೊಂಡು, ಮಿಜೋರಾಂನ ರಾಜಧಾನಿ ಐಜ್ವಾಲ್ ರೈಲು ಜಾಲಕ್ಕೆ ಸಂಪರ್ಕಗೊಂಡಿತು. ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಗಳಲ್ಲಿ ಒಂದಾದ, ಚೆನಾಬ್ ಸೇತುವೆ ಸೇರಿದಂತೆ, ಅತ್ಯಂತ ಸವಾಲಿನ ಭೌಗೋಳಿಕ ಪ್ರದೇಶಗಳನ್ನು ದಾಟಿ, ಈ ಯೋಜನೆ ಪೂರ್ಣಗೊಂಡಿತು.

<><><>

**ಕೊಪ್ಪಳ ಜಿಲ್ಲೆಯ ಯಲಬುರ್ಗಾ** ತಾಲೂಕಿನ ಬೇವೂರು ಗ್ರಾಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 25 ವರ್ಷಗಳ ಸಾರ್ವಜನಿಕ ಸೇವೆ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ಅವರ ಜನಪರ ಆಡಳಿತ ಮತ್ತು ಸೇವಾ ಕಾರ್ಯಗಳನ್ನು ಸ್ಮರಿಸುವ ಉದ್ದೇಶದಿಂದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು. ಗ್ರಾಮೀಣ ಭಾಗದ ಜನರು ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಕಾಲಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳಬೇಕು. ದೊಡ್ಡ ಆಸ್ಪತ್ರೆಗಳಲ್ಲಿ ದೊರೆಯುವ ತಜ್ಞ ವೈದ್ಯರ ಸೇವೆಯನ್ನು ಗ್ರಾಮೀಣ ಜನರ ಮನೆ ಬಾಗಿಲಿಗೆ ತಲುಪಿಸುವ ಇಂತಹ ಶಿಬಿರಗಳು ಅತ್ಯಂತ ಉಪಯುಕ್ತವಾಗಿವೆ ಎಂದು ಕೊಪ್ಪಳದ ಖ್ಯಾತ ಹೃದ್ರೋಗ ತಜ್ಞ,ಡಾಕ್ಟರ್ ನಿಖಿಲ್ ಹೇಳಿದ್ದಾರೆ.

**ಧ್ವನಿ– ಡಾ.ನಿಖಿಲ್ (27 ಸೆಕೆಂದುಗಳು)**

<><><>

**ರಾಜ್ಯದ ವಿವಿಧ ಜಿಲ್ಲೆಗಳ ಬರಪೀಡಿತ** ಪ್ರದೇಶಗಳಿಗೆ, ಕೇಂದ್ರದ ಬರ ಅಧ್ಯಯನ ತಂಡವು ಭೇಟಿ ನೀಡಿ ಸ್ಥಿತಿಗತಿ ಪರಿಶೀಲನೆ ನಡೆಸುತ್ತಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜೀತ್

ಕುಮಾರ್ ಸಾಹು ನೇತೃತ್ವದ ಉನ್ನತ ಮಟ್ಟದ ತಂಡವು, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ಮತ್ತು ಚಳ್ಳಕೆರೆ ತಾಲ್ಲೂಕಿನ ಪ್ರಮುಖ ಹಳ್ಳಿಗಳಿಗೆ ಭೇಟಿ ನೀಡಿ ಬೆಳೆ ಹಾನಿ ಹಾಗೂ ಜಲಕ್ಷಾಮದ ಸ್ಥಿತಿಯನ್ನು ವೀಕ್ಷಿಸಿತು. ಹಿರಿಯೂರು ತಾಲ್ಲೂಕಿನ ಧರ್ಮಪುರ ಹೋಬಳಿಯ ಸಕ್ಕರ ಗ್ರಾಮಕ್ಕೆ ಭೇಟಿ ನೀಡಿದ ತಂಡವು, ಮಳೆ ಕೊರತೆಯಿಂದ ಸಂಪೂರ್ಣ ಒಣಗಿ ಹೋಗಿರುವ ಶೇಂಗಾ, ಮೆಕ್ಕೆಜೋಳ, ಹತ್ತಿ ಹಾಗೂ ತೊಗರಿ ಬೆಳೆಗಳನ್ನು ಪರಿಶೀಲಿಸಿತು. ನಂತರ ಹೊಸಕೆರೆ ಗ್ರಾಮಕ್ಕೆ ತೆರಳಿದ ಅಧಿಕಾರಿಗಳು ಜಲಮೂಲಗಳ ಸಂರಕ್ಷಣಾ ಕಾಮಗಾರಿ ಹಾಗೂ ಜಲ ಜೀವನ್ ಮಿಷನ್ ಯೋಜನೆಯ ಕಾರ್ಯಕ್ಷಮತೆಯನ್ನು ವೀಕ್ಷಿಸಿದರು. ಬಳಿಕ ಕೇಂದ್ರ ಬರ ಅಧ್ಯಯನ ತಂಡವು ಚಳ್ಳಕೆರೆ ತಾಲೂಕಿನ ಪರುಶುರಾಮಪುರ ಹೋಬಳಿಯ ರೈತರ ಸಂಪರ್ಕ ಕೇಂದ್ರ ಆವರಣದಲ್ಲಿನ ರೈತ ಭವನದಲ್ಲಿ ಸ್ಥಳೀಯ ರೈತರೊಂದಿಗೆ ಸಂವಾದ ನಡೆಸಿ, ಮನವಿ ಸ್ವೀಕರಿಸಿತು.

**<><><>**

**ಭಾರತ ಸರ್ಕಾರದ ಪಶುಸಂಗೋಪನೆ ಮತ್ತು** ಹೈನುಗಾರಿಕೆ ಇಲಾಖೆಯ ಉಪ ಆಯುಕ್ತ ಸುಧಾಮ್ ಬೇಗ್, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪ ಸಲಹೆಗಾರ ಆಶಿಶ್ ಪಾಂಡೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧೀನ ಕಾರ್ಯದರ್ಶಿ ಪ್ರದೀಪ್ ಕುಮಾರ್, ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಮಹಾಲನೋಬಿಸ್ ರಾಷ್ಟ್ರೀಯ ಬೆಳೆ ಮುನ್ಸೂಚನೆ ಕೇಂದ್ರದ ಉಪನಿರ್ದೇಶಕ ಕರಣ್ ಚೌಧರಿ ಅವರು ಮೈಸೂರು ಜಿಲ್ಲೆಯ ಸಾಲಿಗ್ರಾಮ ತಾಲ್ಲೂಕಿನ ಗೇರ್ ದಡ ಗ್ರಾಮಕ್ಕೆ ಹಾಗೂ ಅರಕೆರೆ ಗ್ರಾಮಕ್ಕೆ ಭೇಟಿ ನೀಡಿ ಬರ ಪರಿಶೀಲನೆ ನಡೆಸಿದರು. ಅಪರ ಜಿಲ್ಲಾಧಿಕಾರಿ ಐಶ್ವರ್ಯ ಆರ್ ಹಾಗೂ ಜಂಟಿ ಕೃಷಿ ನಿರ್ದೇಶಕ ಕೆ.ಎಚ್ ರವಿ ಸೇರಿದಂತೆ ಅಧಿಕಾರಿಗಳ ತಂಡ ಮಳೆಯ ಕೊರತೆಯಿಂದ ಬೆಳೆಗಳಿಗೆ ಉಂಟಾಗಿರುವ ಹಾನಿ, ಬರಿದಾಗಿರುವ ಕೆರೆಗಳು, ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳ ತಂಡಕ್ಕೆ ಮಾಹಿತಿ ನೀಡಿದರು. ಕೇಂದ್ರದ ಅಧಿಕಾರಿಗಳ ತಂಡ ಅಧಿಕಾರಿಗಳೊಂದಿಗೆ ಚರ್ಚಿಸಿದ ನಂತರ ಗ್ರಾಮಸ್ಥರೊಂದಿಗೆ ಮಾತನಾಡಿ ಬರ ಪರಿಸ್ಥಿತಿ ಕುರಿತು ಮಾಹಿತಿ ಸಂಗ್ರಹಿಸಿದರು. ಗೇರ್ ದಡ ಗ್ರಾಮದಲ್ಲಿ ಹೊಗೆಸೊಪ್ಪು ಬೆಳೆ ಹಾಗೂ ಅರಕೆರೆ ಗ್ರಾಮದಲ್ಲಿ ರಾಗಿ ಬೆಳೆ ಹಾನಿಯ ಬಗ್ಗೆ ಕೃಷಿ ಇಲಾಖೆ ಅಧಿಕಾರಿಗಳು ವಿವರಿಸಿದರು.

**<><><>**

**ಮುಂಬೈ ಹಾಗೂ ಕರ್ನಾಟಕದ** ಕರಾವಳಿ ಪ್ರದೇಶವನ್ನು ಬೆಸೆಯುವ ಪ್ರಸಿದ್ಧ ಮತ್ಸ್ಯಗಂಧ ಹಾಗೂ CST ರೈಲುಗಳಲ್ಲಿ ವಿಪರೀತ ಕಳ್ಳತನ ನಡೆಯುತ್ತಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿರುವ ಹಿನ್ನೆಲೆ, ಮುಂದಿನ ವಾರವೇ ದೆಹಲಿಗೆ ತೆರಳಿ ರೈಲ್ವೆ ಖಾತೆ ಸಚಿವರನ್ನು ಭೇಟಿಯಾಗಿ ಈ ವಿಚಾರವಾಗಿ ಚರ್ಚಿಸುವುದಾಗಿ ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ತಿಳಿಸಿದ್ದಾರೆ.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**